ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಬೀದರ್ ವಕ್ಫ್ ಸೇರಿದ ಆಸ್ತಿ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

405 (584) ಮಾನ್ಯ ಪಶುಸಂಗೋಪನೆ ಮತ್ತು ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಿಲ್ಲೆಯಲ್ಲಿ ಎಷ್ಟು ಎಕರೆ ಜಮೀನು ವಕ್ಫ್ ಮಂಡಳಿಗೆ ಸೇರಿದೆ ಅದರಲ್ಲಿ ಎಷ್ಟು ಎಕರೆ ಜಮೀನು ಅತಿಕ್ರಮಣವಾಗಿದೆ; ಅತಿಕ್ರಮಣವಾಗಿದ್ದಲ್ಲಿ ತೆರವುಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು;

(ಆ) ಜಿಲ್ಲೆಯಲ್ಲಿ ವಕ್ಫ್ ಮಂಡಳಿಗೆ ಸೇರಿದ ಎಷ್ಟು ಎಕರೆ ಜಮೀನು ಖಾಸಗಿಯವರಿಗೆ ಭೂ ನ್ಯಾಯ ಮಂಡಳಿಯಿಂದ ಗೇಣಿ ಹಕ್ಕನ್ನು ನೀಡಲಾಗಿದೆ;

(ಇ) ಗೇಣಿ ಹಕ್ಕನ್ನು ನೀಡಲು ಅವಕಾಶವಿದೆಯೇ; ಇದ್ದಲ್ಲಿ, ಅದು ಯಾವ ಕಾನೂನಿನ ಅಡಿಯಲ್ಲಿದೆ? (ಮಾಹಿತಿ ನೀಡುವುದು)